ಮಾಡುವುದೇ?

ಡಾ: ಜಿ.ಪರಮೇಶ್ವರ (ಉನ್ನತ ಶಿಕ್ಷಣ ಸಚಿವರು):

೧. ಹೌದು

೨. ೨೦೦೧-೨೦೦೨ನೇ ಸಾಲಿನಲ್ಲಿ ಸಾಕಷ್ಟು ಹಣ ಒದಗಿಸಿಕೊಂಡು ಬಾಕಿ ಮೊಬಲಗನ್ನು ಬಿಡುಗಡೆ ಮಾಡಲು ಕ್ರಮ ಕೈಗೊಳ್ಳಲಾಗುವುದು.

ಬೆಂಗಳೂರಿನ ಎಸ್.ಡಿ.ಎಸ್. ಟಿಬಿ ಹಾಗೂ ರಾಜೀವ್‌ಗಾಂಧಿ ಆಸ್ಪತ್ರೆಗಳು.

೧೪೫೦(೧೬೭೯)

ಶ್ರೀ ಸೋಮಣ್ಣ ವಿ. (ಬಿನ್ನಿಪೇಟೆ): ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಂಗಳೂರಿನಲ್ಲಿರುವ ಎಸ್‌ಡಿಎಸ್ ಟಿಬಿ ಹಾಗೂ ರಾಜೀವ್‌ಗಾಂಧಿ ಇನ್ಸ್‌ಟಿಟ್ಯೂಟ್ ಆಫ್ ಚೆಸ್ಟ್ ರೋಗಗಳ ಆಸ್ಪತ್ರೆಯನ್ನು ಸ್ವಾಯತ್ತ ಆಸ್ಪತ್ರೆಯನ್ನಾಗಿ ಪರಿವರ್ತಿಸಲು ಪ್ರಸ್ತಾವವೇನಾದರೂ ಸರ್ಕಾರದ ಮುಂದಿದೆಯೇ?

ಆ) ಬಂದಿದ್ದಲ್ಲಿ ಈ ಬಗ್ಗೆ ಸರ್ಕಾರ ಜರುಗಿಸಿರುವ ಕ್ರಮವೇನು?

ಡಾ: ಎ.ಬಿ.ಮಾಲಕರೆಡ್ಡಿ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):

(ಅ) ಅಧೀಕ್ಷಕರು, ಎಸ್.ಡಿ.ಎಸ್. ಟಿ.ಬಿ. ಮತ್ತು ರಾಜೀವ್ ಗಾಂಧಿ ಎದೆ ರೋಗಗಳ ಆಸ್ಪತ್ರೆ ಇವರಿಂದ ಪ್ರಸ್ತಾವನೆ ಬಂದಿರುತ್ತದೆ.

ಆ) ಪರಿಶೀಲನೆಯಲ್ಲಿದೆ.

ಅರಸೀಕೆರೆ ತಾಲ್ಲೂಕಿನಲ್ಲಿ ಸರ್ಕಾರಿ ಶಾಲಾ ಕಾಲೇಜುಗಳಿಗೆ ಕಾಂಪೌಂಡ್ ಇಲ್ಲದಿರುವುದು.

೧೪೫೧(೧೬೬೯)

ಶ್ರೀ ಸಿದ್ದಪ್ಪ ಜಿ.ವಿ.(ಅರಸೀಕೆರೆ): ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ